## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಕೆ.ಕೆ.ರಾಠೋಡ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಫಜಲಪೂರ ಹಾಗೂ ಇನ್ನಿತರರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:-

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/Uplok/GLB-1330/2016/DRE-3 ದಿನಾಂಕ. 18.03.2017.

2) ಮಾನ್ಯ ಉಪ ಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ GLB-1330/2016/DRE-3 ದಿನಾಂಕ. 14.03.2017.

-----

**ಪ್ರಸ್ತಾವನೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 18.03.2017ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-1 ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಸಂತೋಷ ಟಿ. ದೊಡ್ಡಮನಿ, ನಂದರಗಾ ಗ್ರಾಮ, ಅಫಜಲಪೂರ ತಾಲ್ಲೂಕು, ಕಲಬುರಗಿ ಜಿಲ್ಲೆ ಇವರು 2014-15ನೇ ಸಾಲಿನಲ್ಲಿ ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಂಜೂರಾದ ಅಂದಾಜು ಮೊತ್ತ 3.00/- ಲಕ್ಷ ಮೊತ್ತದ ನಂದರಗಾ ಗ್ರಾಮದ ಮುಖ್ಯ ರಸ್ತೆಯಿಂದ ಶಾಲೆಯವರೆಗೆ ಸಿ.ಸಿ.ರಸ್ತೆ ಹಾಗೂ ರೂ. 5.00/- ಲಕ್ಷ ಮೊತ್ತದ ನಂದರಗಾದಿಂದ ಬಳೂರ್ಗಿ ಕೂಡುವ ರಸ್ತೆ ಕಾಮಗಾರಿಗಳನ್ನು ಅನುಷ್ಠಾನಗೊಳಸದೇ ಸರ್ಕಾರದ ಹಣವನ್ನು ಈ ಕೆಳಕಂಡ ಅಧಿಕಾರಿ/ನೌಕರರು ದುರುಪಯೋಗಪಡಿಸಿಕೊಂಡಿದ್ದಾರೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

1. ಶ್ರೀ ಕೆ.ಕೆ.ರಾಠೋಡ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಫಜಲಪೂರ.

2. ಶ್ರೀ ಹೊನ್ನೇಶ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಫಜಲಪೂರ.
3. ಶ್ರೀ ಸಂಜೀವ ಕಾಂಬ್ಳೆ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಫಜಲಪೂರ.
4. ಶ್ರೀ ಅನಂತಾಚಾರ್ಯ ಮೋಗಾರೆ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಫಜಲಪೂರ.

ಸದರಿ ದೂರಿಗೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತ ಕಚೇರಿಯ ತನಿಖಾಧಿಕಾರಿಯವರು ತನಿಖೆಯನ್ನು ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ಸದರಿ ಆಪಾದಿತರುಗಳ ವಿರುದ್ಧ ಮಾಡಿರುವ ಆರೋಪಗಳು ಸುಳ್ಳು ಎಂದು ಸಾಬೀತಾಗಿವೆ ಎಂದು ತಿಳಿಸಿರುತ್ತಾರೆ.

ಸದರಿ ದೂರಿನ ಬಗ್ಗೆ ಲೋಕಾಯುಕ್ತ ಕಚೇರಿಯು ಮೇಲಿನ 4 ಜನ ಆಪಾದಿತರಿಂದ ಆಕ್ಷೇಪಣೆಯನ್ನು ಪಡೆಯಲಾಗಿದ್ದು, ಶ್ರೀ ಕೆ.ಕೆ.ರಾಠೋಡ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ದಿನಾಂಕ 30.01.2017ರಂದು ಸಲ್ಲಿಸಿರುವ ಹೇಳಿಕೆಯಲ್ಲಿ ಸದರಿ ಕಾಮಗಾರಿಗೆ ದಿನಾಂಕ 10.03.2015ರಂದು ಆಡಳಿತಾತ್ಮಕ ಅನುಮೋದನೆಯನ್ನು ಹಾಗೂ ದಿನಾಂಕ 11.03.2015ರಂದು ತಾಂತ್ರಿಕ ಅನುಮೋದನೆಯನ್ನು ಪಡೆಯಲಾಗಿರುತ್ತದೆಂದೂ, ನಂದರಗಾ ಗ್ರಾಮದ ಮುಖ್ಯ ರಸ್ತೆಯಿಂದ ಶಾಲೆಯವರೆಗೆ ಸಿ.ಸಿ.ರಸ್ತೆ ಕಾಮಗಾರಿಯನ್ನು ಶ್ರೀ ಅನಂತಾಚಾರ್ಯ ಮೊಗಾರೆ ಇವರು ಅನುಷ್ಟಾಗೊಳಿಸಿರುತ್ತಾರೆಂದೂ ಹಾಗೂ ನಂದರಗಾದಿಂದ ಬಳೂರ್ಗಿ ಕೂಡುವ ರಸ್ತೆ ಕಾಮಗಾರಿಯ ಸ್ವಲ್ಪ ಭಾಗವನ್ನು ಶ್ರೀ ಸಂಜೀವ ಕಾಂಬ್ಳೆ ಇವರು ನಿರ್ವಹಿಸಿದ್ದು ಇವರ ವರ್ಗಾವಣೆಯಾದ ಕಾರಣ ಸದರಿ ಕಾಮಗಾರಿಯನ್ನು ಶ್ರೀ ಅನಂತಚಾರ್ಯ ಮೊಗಾರೆ ಇವರು ಪೂರ್ಣಗೊಳಿಸಿರುತ್ತಾರೆಂದೂ, ಸದರಿ ಎರಡೂ ಕಾಮಗಾರಿಗಳ ಅಳತೆಗಳನ್ನು ತಾವು ದಾಖಲಿಸಿರುವುದಾಗಿಯೂ, ಸದರಿ ಕಾಮಗಾರಿಯಲ್ಲಿ ಯಾವುದೇ ಅವ್ಯವಹಾರ ಆಗಿಲ್ಲವೆಂದು ಆದ ಕಾರಣ ಸದರಿ ಪ್ರಕರಣವನ್ನು ಇಲ್ಲಿಗೆ ಮುಕ್ತಾಯಗೊಳಿಸುವಂತೆ ಕೋರಿರುತ್ತಾರೆ. ಶ್ರೀ ಹೊನ್ನೇಶ, ಕಿರಿಯ ಇಂಜಿನಿಯರ್ ಇವರು ಸದರಿ ಕಾಮಗಾರಿಗಳಿಗೂ ತಮಗೂ ಯಾವುದೇ ಸಂಬಂಧವಿಲ್ಲವೆಂದು ತಿಳಿಸಿರುತ್ತಾರೆ. ಶ್ರೀ ಸಂಜೀವ ಕಾಂಬ್ಳೆ ಇವರು ತಾವು ನಂದರಗಾ ಗ್ರಾಮದಿಂದ ಬಳೂರ್ಗಿ ಕೂಡುವ ರಸ್ತೆ ಕಾಮಗಾರಿಯ ಸ್ವಲ್ಪ ಭಾಗವನ್ನು ನಿರ್ವಹಿಸಿ ಅಳತೆಗಳನ್ನು ದಾಖಲಿಸಿರುವುದಾಗಿಯೂ, ತದನಂತರ ಕಾಮಗಾರಿಯ ಮುಂದುವರೆದ ಭಾಗವನ್ನು ಶ್ರೀ ಅನಂತಾಚಾರ್ಯರವರು ನಿರ್ವಹಿಸಿರುತ್ತಾರೆಂದೂ ತಮ್ಮಿಂದ ಯಾವುದೇ ಲೋಪವಾಗಿಲ್ಲವೆಂದೂ ಆದ ಕಾರಣ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸುವಂತೆ ಕೋರಿರುತ್ತಾರೆ. ಶ್ರೀ ಅನಂತಾಚಾರ್ಯ ಮೊಗಾರೆ, ಕಿರಿಯ ಇಂಜಿನಿಯರ್ ಇವರು ಸದರಿ ಪ್ರಶ್ನಿತ ಎರಡೂ ಕಾಮಗಾರಿಗಳನ್ನು ನಿರ್ವಹಿಸಿರುವುದಾಗಿ ತಿಳಿಸಿ, ದೂರಿನಲ್ಲಿನ ಅಂಶಗಳನ್ನು ಅಲ್ಲಗಳೆಯುತ್ತಾ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸುವಂತೆ ಕೋರಿರುತ್ತಾರೆ.

ನಂದರಗಾ ಗ್ರಾಮದ ಮುಖ್ಯ ರಸ್ತೆಯಿಂದ ಶಾಲೆಯವರೆಗೆ ಸಿ.ಸಿ. ರಸ್ತೆ ಕಾಮಗಾರಿಯಲ್ಲಿ ದಾಖಲೆಗಳ ಪರಿಶೀಲನೆಯಿಂದ ಕಂಡುಬಂದ ನ್ಯೂನತೆಗಳು ಹಾಗೂ ನಂದರಗಾದಿಂದ ಬಲೂರ್ಗಿ ರಸ್ತೆ ಅಭಿವೃದ್ಧಿ ಕಾಮಗಾರಿಯಲ್ಲಿನ ನ್ಯೂನತೆಗಳ ಬಗ್ಗೆ ಮಾನ್ಯ ಉಪ ಲೋಕಾಯುಕ್ತರವರು ಪ್ರಸ್ತಾಪಿಸಿರುತ್ತಾರೆ. ಅಲ್ಲದೆ, ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಿದ್ದು, ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರುಗಳ ಪೈಕಿ ಶ್ರೀ ಹೊನ್ನೇಶ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಫಜಲಪೂರ ಇವರಿಗೂ ಪ್ರಶ್ನಿತ ಕಾಮಗಾರಿಗಳಿಗೂ ಸಂಬಂದ ಇರುವುದಿಲ್ಲವಾದ್ದರಿಂದ ಇವರ ವಿರುದ್ಧದ ನಡವಳಿಕೆಯನ್ನು ಕೈ ಬಿಡಲಾಗಿದೆಯೆಂದೂ, ಇನ್ನುಳಿದ ಆಪಾದಿತರರ ವಿರುದ್ಧದ ನಡವಳಿಯನ್ನು ಕೈ ಬಿಡಲು ಸೂಕ್ತ /

ಸಮಂಜಸ / ಸಮಾಧಾನಕರ ಅಂಶಗಳು ಕಂಡುಬರುವುದಿಲ್ಲವೆಂದು, ಹಾಘಾಗಿ ಪ್ರಕರಣದಲ್ಲಿ ಭಾಗಿಯಾಗಿರುವ 3 ಜನ ಆಪಾದಿತರುಗಳು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯದಲ್ಲಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) ನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತ-1ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಕಲಬುರಗಿ ಜಿಲ್ಲೆಯ ಅಫಜಲಪೂರ ತಾಲ್ಲೂಕಿನ ನಂದರಗಾ ಗ್ರಾಮದಲ್ಲಿ 2014-15ನೇ ಸಾಲಿನಲ್ಲಿ ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಂಜೂರಾದ ಪ್ರಶ್ನಿತ ರಸ್ತೆ ಕಾಮಗಾರಿಗಳನ್ನು ಅಂದಾಜು ಪಟ್ಟಿಯಲ್ಲಿ ಅನುಮೋದಿಸಿರುವಂತೆ ಅನುಷ್ಠಾನಗೊಳಿಸದೇ ಲೋಪ ಎಸಗಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಆದ್ದರಿಂದ ಸದರಿ ಆಪಾದಿತರುಗಳು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) (i) (ii) & (iii) ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಅವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವೆಂದು ಕಂಡುಬರುತ್ತದೆ. ಆದ್ದರಿಂದ, ಸದರಿ 3 ಜನ ಆಪಾದಿತರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 39 ಇಎನ್‌ಕ್ಯೂ 2017 ಬೆಂಗಳೂರು,**
**ದಿನಾಂಕ.21.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಅಧಿಕಾರಿ / ನೌಕರರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ:-

1. ಶ್ರೀ ಕೆ.ಕೆ.ರಾಠೋಡ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಫಜಲಪೂರ.

2. ಶ್ರೀ ಸಂಜೀವ ಕಾಂಬ್ಳೆ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಫಜಲಪೂರ (ಹಾಲಿ ಸಣ್ಣ ನೀರಾವರಿ ಉಪ ವಿಭಾಗ, ಸೇಡಂ, ಕಲಬುರಗಿ ಜಿಲ್ಲೆ)

3. ಶ್ರೀ ಅನಂತಾಚಾರ್ಯ ಮೋಗಾರೆ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಫಜಲಪೂರ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

21/04/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
7. ಉಪ ನಿಬಂಧಕರು ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸಂಬಂಧಪಟ್ಟ ಆಪಾದಿತ ಅಧಿಕಾರಿಗಳಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ ಇವರ ಮುಖಾಂತರ.
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ ಯವರಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಬಿ&ಸಿ).
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
12. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.